# National
# Kannada
# 25.02.2026 7.35 p.m.
## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಆಯುರ್ವೇದ, ಯೋಗ ಹಾಗೂ ಇತರ ಆಯುಷ್ ವ್ಯವಸ್ಥೆಗಳು ಸಮಗ್ರ ಆರೋಗ್ಯ ನಿರ್ವಹಣೆಯ ವಿಜ್ಞಾನ – ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಮತ
2. ಎರಡು ದಿನಗಳ ಇಸ್ರೇಲ್ ಭೇಟಿಗಾಗಿ ಇಂದು ಟೆಲ್ ಅವಿವ್ ತಲುಪಿದ ಪ್ರಧಾನಿ ನರೇಂದ್ರ ಮೋದಿ
3. ದೃಢವಾದ ಹಣಕಾಸು ವ್ಯವಸ್ಥೆ, ದೇಶದ ಮೂಲಸೌಕರ್ಯ ಮತ್ತು ಉತ್ಪಾದನೆ ತೀವ್ರಗೊಳಿಸುವಲ್ಲಿ ನಿರ್ಣಾಯಕ – ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ
4. ಐಸಿಸಿ ಟಿ–20 ವಿಶ್ವಕಪ್ ಕ್ರಿಕೆಟ್: ನ್ಯೂಜಿಲ್ಯಾಂಡ್ ವಿರುದ್ಧ ಟಾಸ್ ಗೆದ್ದ ಶ್ರೀಲಂಕಾ, ಫೀಲ್ಡಿಂಗ್ ಆಯ್ಕೆ

**************

ಆಯುರ್ವೇದ, ಯೋಗ ಮತ್ತು ಇತರ ಆಯುಷ್ ವ್ಯವಸ್ಥೆಗಳು ಕೇವಲ ರೋಗಗಳ ಚಿಕಿತ್ಸೆಗೆ ಸೀಮಿತವಾಗಿಲ್ಲ, ಇವು ಸಮಗ್ರ ಆರೋಗ್ಯ ನಿರ್ವಹಣೆಯ ವಿಜ್ಞಾನವಾಗಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಪ್ರಾಯಪಟ್ಟಿದ್ದಾರೆ.

ಆಯುರ್ವೇದವು ಆಹಾರ ಪದ್ಧತಿ, ದೈನಂದಿನ ದಿನಚರಿ ಮತ್ತು ರೋಗ ತಡೆಗಟ್ಟುವಿಕೆಗೆ ವೈಜ್ಞಾನಿಕ ಮಾರ್ಗಸೂಚಿಗಳನ್ನು ಒದಗಿಸುತ್ತವೆ ಎಂದು ಅವರು ಹೇಳಿದರು.

ಅಖಿಲ ಭಾರತ ಆಯುರ್ವೇದ ಕಾಂಗ್ರೆಸ್‌ನ ಸಹಯೋಗದೊಂದಿಗೆ ಆಯುಷ್ ಸಚಿವಾಲಯವು ಬುಲ್ಡಾನಾ ಜಿಲ್ಲೆಯ ಶೇಗಾಂವ್‌ನಲ್ಲಿ ಆಯೋಜಿಸಿದ್ದ ನಾಲ್ಕು ದಿನಗಳ ರಾಷ್ಟ್ರೀಯ ಆರೋಗ್ಯ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯೋಗಕ್ಷೇಮದ ಮಹತ್ವ ಕುರಿತು ಮಾತನಾಡಿದ ಅವರು, ರೋಗಗಳನ್ನು ಗುಣಪಡಿಸುವುದಕ್ಕಿಂತ ಅವುಗಳ ತಡೆಗಟ್ಟುವಿಕೆ ಉತ್ತಮ ಎಂಬುದು ಸಾರ್ವತ್ರಿಕವಾಗಿ ಅಂಗೀಕರಿಸಲ್ಪಟ್ಟ ಸತ್ಯ. ರೋಗವನ್ನು ತಡೆಗಟ್ಟುವುದು ವ್ಯಕ್ತಿಯ ಆರೋಗ್ಯ ದೃಷ್ಟಿಯಿಂದ ಪ್ರಯೋಜನಕಾರಿ ಮಾತ್ರವಲ್ಲದೇ, ದೇಶದ ಆರೋಗ್ಯ ವ್ಯವಸ್ಥೆಯ ಮೇಲಿನ ಹೊರೆಯನ್ನು ಕಡಿಮೆ ಮಾಡುತ್ತದೆ ಎಂದು ತಿಳಿಸಿದರು.

ವಿಶ್ವಾದ್ಯಂತ ಜನರು ಒತ್ತಡರಹಿತ ಮತ್ತು ಆರೋಗ್ಯಕರ ಜೀವನ ಶೈಲಿಗಾಗಿ ಯೋಗವನ್ನು ಅಳವಡಿಸಿಕೊಳ್ಳುತ್ತಿದ್ದಾರೆ. ಆಯುರ್ವೇದ ಚಿಕಿತ್ಸೆಗಳು ಮತ್ತು ಔಷಧಿಗಳು ಪ್ರಪಂಚಾದ್ಯಂತ ಜನರಿಗೆ ಪ್ರಯೋಜನಗಳನ್ನು ನೀಡುತ್ತಿವೆ ಎಂದು ರಾಷ್ಟ್ರಪತಿ ಅವರು ಹೇಳಿದರು.

ಧ್ವನಿ: ರಾಷ್ಟ್ರಪತಿ ದ್ರೌಪದಿ ಮುರ್ಮು

**************

ಎರಡು ದಿನಗಳ ಇಸ್ರೇಲ್ ಭೇಟಿಗಾಗಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಇಂದು ಮಧ್ಯಾಹ್ನ, ರಾಜಧಾನಿ ಟೆಲ್ ಅವಿವ್ ನಗರ ತಲುಪಿದ್ದಾರೆ.

ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ಅವರ ಪತ್ನಿ ಸಾರಾ ನೆತನ್ಯಾಹು ಅವರಿಂದ ವಿಮಾನ ನಿಲ್ದಾಣದಲ್ಲಿ ಮೋದಿ ಅವರಿಗೆ ಸಾಂಪ್ರದಾಯಿಕ ಸ್ವಾಗತ ದೊರೆಯಿತು.

ಭೇಟಿಯ ಸಮಯದಲ್ಲಿ ದ್ವಿಪಕ್ಷೀಯ ಚರ್ಚೆಗಳಲ್ಲಿ ತೊಡಗಿಸಿಕೊಳ್ಳಲು ಮತ್ತು ಭಾರತ–ಇಸ್ರೇಲ್ ಸ್ನೇಹವನ್ನು ಮತ್ತಷ್ಟು ಬಲಪಡಿಸುವ ಫಲಪ್ರದ ಫಲಿತಾಂಶಗಳನ್ನು ಸಾಧಿಸಲು ತಾವು ಎದುರು ನೋಡುತ್ತಿರುವುದಾಗಿ ಪ್ರಧಾನಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಕಳೆದ ಒಂಭತ್ತು ವರ್ಷಗಳಲ್ಲಿ ಪ್ರಧಾನಿ ಮೋದಿ ಅವರು ಇಸ್ರೇಲ್‌ಗೆ ನೀಡುತ್ತಿರುವ ಎರಡನೇ ಭೇಟಿ ಇದಾಗಿದೆ ಎಂದು ವಿದೇಶಾಂಗ ಸಚಿವಾಲಯ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದೆ. ವಿಜ್ಞಾನ ಮತ್ತು ತಂತ್ರಜ್ಞಾನ, ನಾವೀನ್ಯತೆ, ರಕ್ಷಣೆ ಮತ್ತು ಕೃಷಿ ಕ್ಷೇತ್ರದಲ್ಲಿ ಆಳವಾದ ಸಹಕಾರದೊಂದಿಗೆ ಕಾರ್ಯತಂತ್ರದ ಮತ್ತು ತಾಂತ್ರಿಕ ಕ್ಷೇತ್ರಗಳಲ್ಲಿ ಇಸ್ರೇಲ್ ಭಾರತದ ಪ್ರಮುಖ ಪಾಲುದಾರ ರಾಷ್ಟ್ರವಾಗಿದೆ. ಈ ಸಂಬಂಧವು ಪರಸ್ಪರ ನಂಬಿಕೆ, ಹಂಚಿಕೆಯ ಆದ್ಯತೆಗಳು ಮತ್ತು ಭವಿಷ್ಯದ ತಂತ್ರಜ್ಞಾನಗಳಲ್ಲಿ ಬೆಳೆಯುತ್ತಿರುವ ಒಮ್ಮುಖದಲ್ಲಿ ನೆಲೆಗೊಂಡಿದೆ.

**************

ಭಾರತ-ಇಸ್ರೇಲ್ ಮುಕ್ತ ವ್ಯಾಪಾರ ಒಪ್ಪಂದದ ಕುರಿತು ನವದೆಹಲಿಯಲ್ಲಿ ಇಸ್ರೇಲ್ ನಿಯೋಗದೊಂದಿಗೆ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಮಾತುಕತೆ ನಡೆಸಿದ್ದಾರೆ.

ಇಸ್ರೇಲ್ ನಿಯೋಗದೊಂದಿಗಿನ ಸಂವಾದವು ಉತ್ಪಾದಕವಾಗಿದ್ದು, ಇದು ಆರ್ಥಿಕ ಒಳಗೊಳ್ಳುವಿಕೆಯನ್ನು ಆಳಗೊಳಿಸುವ ಇಸ್ರೇಲ್‌ನ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸಚಿವ ಗೋಯಲ್ ಬಣ್ಣಿಸಿದ್ದಾರೆ.

ವ್ಯಾಪಾರ, ನಾವೀನ್ಯತೆ ಮತ್ತು ಬೆಳವಣಿಗೆಯಲ್ಲಿ ಹೊಸ ಅವಕಾಶಗಳನ್ನು ತೆರೆಯುವಂತೆ ಮಾಡಲು ಮತ್ತು ಎರಡೂ ದೇಶಗಳ ನಡುವಿನ ಮೌಲ್ಯಯುತ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಉಭಯ ಪಕ್ಷದವರು ನಿಕಟವಾಗಿ ಕೆಲಸ ಮಾಡುವುದಕ್ಕೆ ಇದು ಉತ್ತೇಜನಕಾರಿಯಾಗಿದೆ ಎಂದು ಅವರು ಹೇಳಿದರು.

ಪ್ರಧಾನ ಮಂತ್ರಿ ನರೇಂದ್ರ ಮೋದಿ, ತಮ್ಮ ಇಸ್ರೇಲ್ ಪ್ರತಿರೂಪಿ ಬೆಂಜಮಿನ್ ನೆತನ್ಯಾಹು ಅವರನ್ನು ಭೇಟಿಯಾಗುತ್ತಿರುವ ಸಂದರ್ಭದಲ್ಲಿ, ಅವರ ಹಂಚಿಕೆಯ ದೃಷ್ಟಿಕೋನವು ಸ್ಥಿರವಾಗಿ ಕಾರ್ಯರೂಪಕ್ಕೆ ಬರುತ್ತಿದೆ ಎಂದು ಗೋಯಲ್ ಹೇಳಿದ್ದಾರೆ.

**************

ಆತ್ಮನಿರ್ಭರ ಭಾರತ್ ಅಡಿಯಲ್ಲಿ ಸ್ಥಳೀಯ ಉತ್ಪಾದನೆ ಮತ್ತು ರಫ್ತು ಎರಡಕ್ಕೂ ಸ್ಥಳೀಯ ರಕ್ಷಣಾ ಉದ್ಯಮದ ಸಾಮರ್ಥ್ಯವನ್ನು ವಿಸ್ತರಿಸುವ ಸರ್ಕಾರದ ದೃಢಸಂಕಲ್ಪ ಮತ್ತು ಈ ದೃಷ್ಟಿಕೋನವನ್ನು ಸಾಕಾರಗೊಳಿಸುವಲ್ಲಿ ಭಾರತೀಯ ರಾಜತಾಂತ್ರಿಕರು ವಹಿಸಿದ ನಿರ್ಣಾಯಕ ಪಾತ್ರವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ಲಾಘಿಸಿದ್ದಾರೆ.

ನವದೆಹಲಿಯ ಸೌತ್ ಬ್ಲಾಕ್‌ನಲ್ಲಿ ಭಾರತೀಯ ವಿದೇಶಾಂಗ ಸೇವೆಯ ತರಬೇತಿ ಅಧಿಕಾರಿಗಳನ್ನುದ್ದೇಶಿಸಿ ಅವರು ಮಾತನಾಡಿದರು.  ಭಾರತವು ರಕ್ಷಣಾ ಉಪಕರಣಗಳ ಪ್ರಮುಖ ಆಮದುದಾರ ಸ್ಥಾನದಿಂದ, ತಯಾರಕ ಮತ್ತು ರಫ್ತುದಾರ ಸ್ಥಾನದವರೆಗೆ ಬಹಳ ದೂರ ಸಾಗಿ ಬಂದಿದೆ ಎಂದು ಅವರು ಹೇಳಿದರು.

ಭಾರತದ ಬೆಳವಣಿಗೆಯನ್ನು ನಿಕಟವಾಗಿ ವೀಕ್ಷಿಸುತ್ತಿರುವ ಜಾಗತಿಕ ರಾಷ್ಟ್ರಗಳ ಸಮುದಾಯವು ದೇಶದ ನಾಯಕತ್ವದ ಪಾತ್ರವನ್ನು ಎದುರು ನೋಡುತ್ತಿದೆ ಎಂದು ಸಚಿವರು ತಿಳಿಸಿದರು.

**************

ಎನ್‌ಸಿಇಆರ್‌ಟಿಯ 8ನೇ ತರಗತಿ ಪಠ್ಯ ಪುಸ್ತಕದಲ್ಲಿ ನ್ಯಾಯಾಂಗದಲ್ಲಿನ ಭ್ರಷ್ಟಾಚಾರ ಕುರಿತಾದ ಉಲ್ಲೇಖಗಳ ಕುರಿತು ಸುಪ್ರೀಂಕೋರ್ಟ್ ಇಂದು ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡಿದ್ದು, ಈ ವಿಷಯವನ್ನು ಕಳವಳಕಾರಿ ಎಂದು ಬಣ್ಣಿಸಿದೆ.

ಮುಖ್ಯನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ನ್ಯಾಯಮೂರ್ತಿಗಳಾದ ಜಾಯ್‌ಮಲ್ಯ ಬಾಗ್ಚಿ ಹಾಗೂ ವಿಪುಲ್ ಎಂ. ಪಂಚೋಲಿ ಅವರನ್ನೊಳಗೊಂಡ ಪೀಠವು ನ್ಯಾಯಾಂಗದಂತಹ ಸಾಂವಿಧಾನಿಕ ಸಂಸ್ಥೆಯ ಘನತೆಗೆ ಧಕ್ಕೆತರುವ ಅಥವಾ ಅಪಪ್ರಚಾರ ಮಾಡುವ ಯಾವುದೇ ಪ್ರಯತ್ನವನ್ನು ಸಹಿಸುವುದಿಲ್ಲ ಎಂದು ಎಚ್ಚರಿಸಿದೆ.

ಮಕ್ಕಳಿಗೆ ಕಲಿಸುವ ಪಠ್ಯದಲ್ಲಿ ಇಂತಹ ಅಂಶಗಳಿರುವುದು ನ್ಯಾಯಾಂಗದ  ಮೇಲಿನ ವಿಶ್ವಾಸಕ್ಕೆ ಧಕ್ಕೆ ತರುತ್ತದೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

**************

ದೇಶದ ಮೂಲಸೌಕರ್ಯ ಮತ್ತು ಉತ್ಪಾದನಾ ಮಹತ್ವಾಕಾಂಕ್ಷೆಗಳನ್ನು ವೇಗಗೊಳಿಸುವಲ್ಲಿ ದೃಢವಾದ ಹಣಕಾಸು ವ್ಯವಸ್ಥೆಯ ನಿರ್ಣಾಯಕ ಪಾತ್ರವನ್ನು ಕೇಂದ್ರ ಭಾರೀ ಕೈಗಾರಿಕೆಗಳು ಮತ್ತು ಉಕ್ಕು ಖಾತೆ ಸಚಿವ ಎಚ್‌ಡಿ ಕುಮಾರಸ್ವಾಮಿ ಇಂದು ಒತ್ತಿ ಹೇಳಿದರು.

ರಾಷ್ಟ್ರ ರಾಜಧಾನಿಯಲ್ಲಿ ಆರನೇ ವಾರ್ಷಿಕ ನಿರ್ಮಾಣ ಸಲಕರಣೆ ಹಣಕಾಸು ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಸಚಿವರು, 'ಸ್ಥಿತಿಸ್ಥಾಪಕ ಮೂಲಸೌಕರ್ಯ ಮತ್ತು ನಿರ್ಮಾಣ ಸಲಕರಣೆ ಹಣಕಾಸು ಪರಿಸರ ವ್ಯವಸ್ಥೆಯನ್ನು ನಿರ್ಮಿಸುವುದು, ಜಾಗತಿಕ ವ್ಯಾಪ್ತಿಗಾಗಿ ದೇಶೀಯ ಬಲವನ್ನು ನಿರ್ಮಿಸುವತ್ತ ಎಂಬ ಸಮಾವೇಶದ ಧ್ಯೇಯವು ಸಕಾಲಿಕ ಮತ್ತು ಕಾರ್ಯತಂತ್ರದ ರೀತಿಯಲ್ಲಿ ಭಾರತದ ಬೆಳವಣಿಗೆಯ ಪಥದೊಂದಿಗೆ ಹೊಂದಿಕೆಯಾಗಿದೆ ಎಂದು ಹೇಳಿದರು.

ಎಂದು ಅವರು ತಿಳಿಸಿದರು. ಮೂಲಸೌಕರ್ಯ ವಿಸ್ತರಣೆ, ಉತ್ಪಾದಕತೆ ಮತ್ತು ನಿರಂತರ ಬಂಡವಾಳ ಹೂಡಿಕೆಯಿಂದ ಬೆಳವಣಿಗೆಯ ಪಥವು ನಡೆಸಲ್ಪಡುತ್ತಿದ್ದು, ಮುಂಬರುವ ವರ್ಷಗಳಲ್ಲಿ ಭಾರತವು ಜಗತ್ತಿನ ಮೂರನೇ ಅತಿದೊಡ್ಡ ಆರ್ಥಿಕತೆಯಾಗುವ ಹಾದಿಯಲ್ಲಿ ದೃಢವಾಗಿ ಸಾಗುತ್ತಿದೆ ಎಂದು ಅವರು ಹೇಳಿದರು. ಕೇಂದ್ರದ ಮೂಲಸೌಕರ್ಯ ಬೆಳವಣಿಗೆ ಚಾಲಿತ ಅಭಿವೃದ್ಧಿಯನ್ನು ಎತ್ತಿ ತೋರಿಸಿದ ಸಚಿವರು, ಸರ್ಕಾರವು ಭೌತಿಕ ಸ್ವತ್ತುಗಳ ಜೊತೆಗೆ ದೀರ್ಘಕಾಲೀನ ಕೈಗಾರಿಕಾ ಸಾಮರ್ಥ್ಯವನ್ನು ನಿರ್ಮಿಸುತ್ತಿದೆ ಎಂದು ಸಚಿವ ಕುಮಾರಸ್ವಾಮಿ ತಿಳಿಸಿದರು.

**************

ಪಿಎಂ ಇ-ಡ್ರೈವ್ ಯೋಜನೆಯಡಿಯಲ್ಲಿ ಈವರೆಗೆ 28 ಲಕ್ಷಕ್ಕೂ ಹೆಚ್ಚು ವಿದ್ಯುತ್‌ಚಾಲಿತ ವಾಹನಗಳು ಮಾರಾಟಗೊಂಡಿವೆ ಎಂದು ಕೇಂದ್ರ ಭಾರೀ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ಭಾರತೀಯ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಘಗಳ ಒಕ್ಕೂಟದ ಮೂರನೇ ವಿದ್ಯುತ್ ವಾಹನಗಳ ರಾಷ್ಟ್ರೀಯ ಸಮ್ಮೇಳನವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮಾರಾಟವಾದ ವಾಹನಗಳ ಪೈಕಿ ಸುಮಾರು 20 ಲಕ್ಷಕ್ಕೂ ಹೆಚ್ಚು ದ್ವಿಚಕ್ರ ವಾಹನಗಳಾಗಿದ್ದು, ಸರಿಸುಮಾರು 3 ಲಕ್ಷ ತ್ರಿಚಕ್ರವಾಹನಗಳು ಸೇರಿವೆ. ಪ್ರಮುಖ ನಗರಗಳಲ್ಲಿ 14 ಸಾವಿರಕ್ಕೂ ಹೆಚ್ಚು ವಿದ್ಯುತ್ ಚಾಲಿತ ಬಸ್‌ಗಳು ಮಂಜೂರಾಗಿರುವುದರಿಂದ ಸಾರ್ವಜನಿಕ ಸಾರಿಗೆ ವ್ಯವಸ್ಥೆಯ ವಿದ್ಯುದೀಕರಣವು ವೇಗ ಪಡೆದುಕೊಂಡಿದೆ ಎಂದು ಸಚಿವರು ಹೇಳಿದರು.

ವಿದ್ಯುತ್ ಚಲನಶೀಲತೆ ಕೇವಲ ಹವಾಮಾನ ಉಪಕ್ರಮವಲ್ಲ, ಅದೊಂದು ಕೈಗಾರಿಕಾ ತಂತ್ರ, ಉತ್ಪಾದನಾ ಅವಕಾಶ ಮತ್ತು ಪ್ರಸ್ತುತ ಸವಾಲುಗಳನ್ನು ಎದುರಿಸುವಾಗ ಭವಿಷ್ಯದ ಕೈಗಾರಿಕೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಿರುವ ತಾಂತ್ರಿಕ ಬೆಳವಣಿಗೆಯ ಅವಕಾಶವಾಗಿದೆ ಎಂದು ಸಚಿವ ಕುಮಾರಸ್ವಾಮಿ ತಿಳಿಸಿದರು.

**************

ನವದೆಹಲಿಯಲ್ಲಿ ನಿನ್ನೆ ನಡೆದ ಭಾರತ ಚುನಾವಣಾ ಆಯೋಗ ಮತ್ತು ರಾಜ್ಯ ಚುನಾವಣಾ ಆಯುಕ್ತರ ರಾಷ್ಟ್ರೀಯ ದುಂಡು ಮೇಜಿನ ಸಮ್ಮೇಳನದಲ್ಲಿ 'ರಾಷ್ಟ್ರೀಯ ಘೋಷಣೆ 2026' ಅನ್ನು ಸರ್ವಾನುಮತದಿಂದ ಅಂಗೀಕರಿಸಲಾಗಿದೆ.

ಪಂಚಾಯತ್‌ಗಳು ಮತ್ತು ಪುರಸಭೆ ಸಂಸ್ಥೆಗಳ ಚುನಾವಣೆಗಳಿಗೆ ಸಂಬಂಧಿಸಿದ ಕಾನೂನುಗಳನ್ನು ಸಂಸತ್ತು ಮತ್ತು ರಾಜ್ಯ ಶಾಸಕಾಂಗಗಳ ಚುನಾವಣೆಗಳಿಗೆ ಸಂಬಂಧಿಸಿದ ಕಾನೂನುಗಳೊಂದಿಗೆ ಸಮನ್ವಯಗೊಳಿಸಲು ಭಾರತ ಚುನಾವಣಾ ಆಯೋಗ ಮತ್ತು ರಾಜ್ಯ ಚುನಾವಣಾ ಆಯುಕ್ತರು ಒಟ್ಟಾಗಿ ಕೆಲಸ ಮಾಡುತ್ತಾರೆ ಎಂದು ಈ ಘೋಷಣೆ ತಿಳಿಸುತ್ತದೆ.

ಎಲ್ಲಾ ರಾಜ್ಯಗಳ ಚುನಾವಣಾ ಆಯುಕ್ತರು ರಾಷ್ಟ್ರೀಯ ಘೋಷಣೆ 2026 ಅನ್ನು ಅಳವಡಿಸಿಕೊಳ್ಳಲು ನಿರ್ಧರಿಸಿದ್ದಾರೆ. ಸರಿಯಾದ ಮತದಾರರ ಪಟ್ಟಿಗಳ ತಯಾರಿಕೆಯು ಪ್ರಜಾಪ್ರಭುತ್ವದ ತಳಹದಿಯಾಗಿದ್ದು, ಚುನಾವಣೆಗಳ ಪಾರದರ್ಶಕತೆ ಮತ್ತು ಪರಿಣಾಮಕಾರಿ ನಡವಳಿಕೆಯು ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಅವರು ದೃಢಪಡಿಸಿದ್ದಾರೆ.

ರಾಷ್ಟ್ರೀಯ ಮತ್ತು ಸಾಂವಿಧಾನಿಕ ಹಿತಾಸಕ್ತಿಯಲ್ಲಿ, ಚುನಾವಣಾ ಆಯೋಗದ ಡಿಜಿಟಲ್ ಪ್ಲಾಟ್‌ಫಾರ್ಮ್, ಇವಿಎಂಗಳು ಮತ್ತು ಮತದಾರರ ಪಟ್ಟಿಗಳ ಹಂಚಿಕೆ ಸೇರಿದಂತೆ ಚುನಾವಣೆಗೆ ಸಂಬಂಧಿಸಿದ ಪ್ರಕ್ರಿಯೆಗಳನ್ನು ಸಂಯೋಜಿಸಲು ದೇಶಾದ್ಯಂತ ಎಲ್ಲಾ ರಾಜ್ಯಗಳೊಂದಿಗೆ ಪರಸ್ಪರ ಸ್ವೀಕಾರಾರ್ಹ ಕಾರ್ಯವಿಧಾನಗಳು ಮತ್ತು ಕಾನೂನುಬದ್ಧವಾಗಿ ಕಾರ್ಯಸಾಧ್ಯವಾದ ಚೌಕಟ್ಟುಗಳನ್ನು ರೂಪಿಸಲು ಪ್ರಸ್ತಾಪಿಸಲಾಗಿದೆ ಎಂದು ಆಯೋಗವು ಹೇಳಿಕೆಯಲ್ಲಿ ತಿಳಿಸಿದೆ.

******************

**ಕೊಲೊಂಬೋದ ಆರ್.ಪೇಮದಾಸ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಪುರುಷರ ಟಿ–20 ವಿಶ್ವಕಪ್ ಕ್ರಿಕೆಟ್‌ನ 2ನೇ ಗುಂಪಿನ ಸೂಪರ್ 8ರ ಪಂದ್ಯದಲ್ಲಿಂದು ಶ್ರೀಲಂಕಾ–ನ್ಯೂಜಿಲೆಂಡ್ ತಂಡಗಳು ಮುಖಾಮುಖಿಯಾಗಿದೆ. ಟಾಸ್ ಗೆದ್ದ ಶ್ರೀಲಂಕಾ ತಂಡ, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.**

**ಶ್ರೀಲಂಕಾ ವಿರುದ್ಧ ಬ್ಯಾಟಿಂಗ್ ಮಾಡುತ್ತಿರುವ ನ್ಯೂಜಿಲೆಂಡ್ ತಂಡ ಇತ್ತೀಚಿನ ವರದಿ ಬಂದಾಗ 7 ಓವರ್‌ಗಳಲ್ಲಿ 2 ವಿಕೆಟ್ ನಷ್ಟಕ್ಕೆ 52 ರನ್ ಗಳಿಸಿ ಆಡುತ್ತಿದೆ.**

******************

**ಹುಬ್ಬಳ್ಳಿಯ ಕೆಎಸಿಎ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಕರ್ನಾಟಕ ಹಾಗೂ ಜಮ್ಮು–ಕಾಶ್ಮೀರ ನಡುವಿನ ರಣಜಿ ಟ್ರೋಫಿಯ ಫೈನಲ್ ಪಂದ್ಯದ ಎರಡನೇ ದಿನವಾದ ಇಂದು ತನ್ನ ಮೊದಲನೇ ಇನ್ನಿಂಗ್ಸ್ ಅನ್ನು ಮುಂದುವರೆಸಿರುವ ಜಮ್ಮು–ಕಾಶ್ಮೀರ 4 ವಿಕೆಟ್ ನಷ್ಟಕ್ಕೆ 395 ರನ್ ಗಳಿಸಿ ಆಡುತ್ತಿದೆ.**

******************

**ಗಿಗ್ ಮತ್ತು ಪ್ಲಾಟ್‌ಫಾರ್ಮ್ ಕಾರ್ಮಿಕರಿಗೆ ಸುರಕ್ಷಿತ, ಘನತೆಯುತ ಮತ್ತು ಉತ್ತಮ ಕೆಲಸದ ವಾತಾವರಣವನ್ನು ಒದಗಿಸಲು ಸರ್ಕಾರ ಸಂಪೂರ್ಣವಾಗಿ ಬದ್ಧವಾಗಿದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ.ಮನ್ಸುಖ್ ಮಾಂಡವೀಯ ತಿಳಿಸಿದ್ದಾರೆ.**

**ನವದೆಹಲಿಯಲ್ಲಿಂದು ನಡೆದ ಪವರ್ ಇನ್‌ಕ್ಲೂಸಿವ್ ಗ್ರೋತ್, ರೋಲ್ ಆಫ್ ಪ್ಲಾಟ್‌ಫಾರ್ಮ್ ಸಮ್ಮೇಳನವನ್ನು ಉದ್ದೇಶಿಸಿ ಅವರು ಮಾತನಾಡಿದರು.**

*********ಮುಕ್ತಾಯ*********